**ಆರ್.ಎ.19/2026, ಪಿ.ಡಬ್ಲೂ-1 ಹೆಸರುಃ ಪ್ರಕಾಶ**

**ದಿಃ01-06-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಅಪೀಲುದಾರರ ಪರ ಶ್ರೀ ಹೆಚ್.ಟಿ.ಜೆ. ವಕೀಲರಿಂದಃ**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

**ಪಾಟೀ ಸವಾಲು : ಎದುರುದಾರರ ಪರ ಶ್ರೀ ಜಿ.ಹೆಚ್.ಎಸ್. ವಕೀಲರಿಂದಃ**

2. ನಾನು ಸಲ್ಲಿಸಿರುವ ಸಾಕ್ಷ್ಯದ ಪ್ರಮಾಣ ಪತ್ರದಲ್ಲಿನ ವಿಚಾರಗಳ ಕುರಿತು ನನಗೆ ಮಾಹಿತಿ ಇದೆ. ವಿಚಾರಣಾ ನ್ಯಾಯಾಲಯದಲ್ಲಿ ನಾನು ಎಲ್ಲಾ ವಿಚಾರಣಾ ದಿನಾಂಕದಂದು ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದೆನು ಎಂದರೆ ಸರಿ. ನನಗೆ ವಿಚಾರಣಾ ನ್ಯಾಯಾಲಯದ ತೀರ್ಪು ಮತ್ತು ಡಿಕ್ರಿಯ ಕುರಿತು ಅದೇ ದಿನ ನನಗೆ ಮಾಹಿತಿ ಇತ್ತು ಎಂದರೆ ಸರಿಯಲ್ಲ. ವಿಚಾರಣಾ ನ್ಯಾಯಾಲಯದಲ್ಲಿ ದಿನಾಂಕ 19.12.2025 ರಂದು ತೀರ್ಪು ಆಗಿತ್ತು ಎಂದರೆ ಗೊತ್ತಿಲ್ಲ. ಸದರಿ ಸಮಯದಲ್ಲಿ ನಾವು ನೀರಾವರಿ ಜಮೀನಿನ ವ್ಯವಸಾಯವನ್ನು ಮಾಡುತ್ತಿದ್ದೆವು. ಈ ಕುರಿತು ನಾನು ನನ್ನ ಸಾಕ್ಷ್ಯದ ಪ್ರಮಾಣ ಪತ್ರದಲ್ಲಿ ಉಲ್ಲೇಖ ಮಾಡಿಲ್ಲ. ಎದುರುದಾರರಿಗೆ ತೊಂದರೆ ನೀಡುವ ಸಲುವಾಗಿ ಸುಳ್ಳು ಸಾಕ್ಷ್ಯದ ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ